"1991ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಅಜೀಜ್ ಸೇಠ್ (ಸಾರಿಗೆ ಮತ್ತು ವಕ್ಫ್ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "1991ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. *

6. ಕರ್ನಾಟಕ ಭೂ (ವರ್ಗಾವಣೆಯ ಮೇಲೆ ನಿರ್ಬಂಧ) ವಿಧೇಯಕ, 1991

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು)

ಮಾನ್ಯ ಅಧ್ಯಕ್ಷರೆ :

ಕರ್ನಾಟಕ ಭೂ (ವರ್ಗಾವಣೆಯ ಮೇಲೆ ನಿರ್ಬಂಧ) ವಿಧೇಯಕ, 1991ನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

"1991ನೇ ಸಾಲಿನ ಕರ್ನಾಟಕ ಭೂ (ವರ್ಗಾವಣೆಯ ಮೇಲೆ ನಿರ್ಬಂಧ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ :

"1992ನೇ ಸಾಲಿನ ಕರ್ನಾಟಕ ಭೂ (ವರ್ಗಾವಣೆಯ ಮೇಲೆ ನಿರ್ಬಂಧ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ವಿತ್ತೀಯ ಕಾರ್ಯಕಲಾಪಗಳು

1991-92ನೇ ಸಾಲಿನ ಆಯವ್ಯಯದ ಮೇಲೆ ಸಾಮಾನ್ಯ ಚರ್ಚೆ
(ಮುಂದುವರಿದ ಚರ್ಚೆ)

ಉಪಾಧ್ಯಕ್ಷಿಣಿಯವರು : ಈಗ ವಿತ್ತೀಯ ಕಾರ್ಯಕಲಾಪಗಳು, ಮಾನ್ಯ ಶ್ರೀ ಡಿ.ಬಿ. ಚಂದ್ರೇಗೌಡರು.....

+ ಶ್ರೀ ಡಿ.ಬಿ. ಚಂದ್ರೇಗೌಡ (ವಿರೋಧ ಪಕ್ಷದ ನಾಯಕರು) : ಮಾನ್ಯ ಉಪಾಧ್ಯಕ್ಷಿಣಿಯವರೆ, ನಿನ್ನೆ ನಾನು ಮುಂಗಡ ಪತ್ರದ ಬಗ್ಗೆ ಚರ್ಚೆ ಮಾಡುತ್ತಾ ಈ ಸರಕಾರದ ಸಾಧನೆಯನ್ನು ಕಳೆದ ಬಾರಿ ಹೇಳಿದ್ದೆ. ಅಥವಾ ಶಾಸನ ಸಭೆಯ ಮುಂದೆ ಸರಕಾರದವರು ಹೇಳಿಕೊಂಡಂಥ ಯಾವುದೇ ಭರವಸೆಗೆ ಇದು ಪೂರಕವಾಗಿಲ್ಲ ಎಂಬ ಮಾತನ್ನು ಕೂಡ ಹೇಳಿದ್ದೆ. ವಿಶೇಷವಾಗಿ ಬರಗಾಲವನ್ನು ಪ್ರಸ್ತಾಪ ಮಾಡುತ್ತಾ ಸರಕಾರದವರು ಕುಡಿಯುವ ನೀರಿನ ವಿಚಾರವನ್ನು ಕೂಡ ಪ್ರಸ್ತಾಪ ಮಾಡಿದ್ದಾರೆ. ಹಿಂದಿನ ಸಾರಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಾಗಿ ೩೫ ಕೋಟಿ